**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ/90/ಇ-ಆಡಳಿತ/2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹು ಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:07.09.2021

**ಜಂಟಿ ಸುತ್ತೋಲೆ**

**ವಿಷಯ:** ಆಯುಷ್ಮಾನ್ ಭಾರತ್- ಆರೋಗ್ಯ ಕರ್ನಾಟಕ ಕಾರ್ಡ್ ವಿತರಣೆ ಅಭಿಯಾನ .

**ಉಲ್ಲೇಖ:** ದಿನಾಂಕ:22.07.2021ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ಅಧ್ಯಕ್ಷತೆಯಲ್ಲಿ ನಡೆದ ಜಂಟಿ ಸಭಾ ನಡವಳಿ.

******

ಬಡ ಜನರ ಮತ್ತು ಆರ್ಥಿಕವಾಗಿ ದುರ್ಬಲ ವರ್ಗದವರ ಅಘಾತಕಾರಿ ವೈದ್ಯಕೀಯ ವೆಚ್ಚವನ್ನು ನಿವಾರಿಸಿ ಅವರಕೈಯಿಂದಾಗುವ ಖರ್ಚನ್ನು ತಪ್ಪಿಸಿ ಗ್ರಾಮ ಮತ್ತು ನಗರದಲ್ಲಿರುವ ಬಡವರ ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಯ ಗುರಿಯೊಂದಿಗೆ ಪ್ರಾರಂಭಿಸಲಾಗಿರುವ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಯೋಜನೆಯನ್ನು ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (AB-Ark) ಕಾರ್ಡ್‌ಗಳ ವಿತರಣೆ ಮೂಲಕ ಹೆಚ್ಚು ಉಪಯುಕ್ತಗೊಳಿಸಲು ಹಾಗೂ ಪ್ರಸ್ತುತ ಗ್ರಾಮ ಪಂಚಾಯತಿಗಳಲ್ಲಿ ಕುಂಠಿತವಾಗಿರುವ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಕಾರ್ಡ್‌ಗಳ ವಿತರಣೆಯನ್ನು ಚುರುಕುಗೊಳಿಸುವ ನಿಟ್ಟಿನಲ್ಲಿ **"ಸ್ವಾತಂತ್ರದ ಅಮೃತ ಮಹೋತ್ಸವ"** ಶೀರ್ಷಿಕೆಯಲ್ಲಿ ಶಿಬಿರಗಳ ಅಭಿಯಾನವನ್ನು **15-ಸೆಪ್ಟಂಬರ್-2021** ರಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು CSC,SPV ರವರ ಸಹಯೋಗ ದೊಂದಿಗೆ ರಾಜ್ಯದ ಎಲ್ಲಾ ಜಿಲ್ಲೆಗಳ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ **"ಬಾಪೂಜಿ ಸೇವಾ ಕೇಂದ್ರ" "ಸರ್ಕಾರಿ** ಆಸ್ಪತ್ರೆ" **ಮತ್ತು "ಸಿ.ಎಸ್.ಸಿ"** ಕೇಂದ್ರಗಳ ಮೂಲಕ ಆಯೋಜಿಸಲು ಉಲ್ಲೇಖಿತ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ. ಇದುವರೆಗೂ, ರಾಜ್ಯದಲ್ಲಿ 1.44 ಕೋಟಿ ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಕಾರ್ಡ್‌ಗಳು ವಿತರಣೆಯಾಗಿರುತ್ತವೆ.

ಆದ್ದರಿಂದ, ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಯೋಜನೆಯನ್ನು ಆಯುಷ್ಮಾನ್ ಭಾರತ್- ಆರೋಗ್ಯ ಕರ್ನಾಟಕ (AB-Ark) ಕಾರ್ಡ್‌ಗಳ ವಿತರಣೆ ಮೂಲಕ ಹೆಚ್ಚು ಉಪಯುಕ್ತಗೊಳಿಸಲು **"ಸ್ವಾತಂತ್ರದ ಅಮೃತ ಮಹೋತ್ಸವ"** ಶೀರ್ಷಿಕೆಯಲ್ಲಿ **"ಬಾಪೂಜಿ ಸೇವಾ ಕೇಂದ್ರ" "ಸರ್ಕಾರಿ** ಆಸ್ಪತ್ರೆ" **ಮತ್ತು "ಸಿ.ಎಸ್.ಸಿ"** ಕೇಂದ್ರಗಳ ಮೂಲಕ **15-ಸೆಪ್ಟಂಬರ್-2021** ರಿಂದ ಆಯೋಜಿಸಲಾಗಿರುವ ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ (AB-Ark) ಕಾರ್ಡ್‌ಗಳ ವಿತರಣೆಯ ಕಾರ್ಯಕ್ರಮವನ್ನು ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರು

ಮತ್ತು ಸಿಬ್ಬಂದಿಗಳು ತಮ್ಮ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯತಿಗಳೊಂದಿಗೆ ಸಹಕರಿಸಿ, ಯಶಸ್ವಿಗೊಳಿಸಬೇಕೆಂದು ಸೂಚಿಸಿದೆ.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ
ಕಲ್ಯಾಣ ಇಲಾಖೆ

ಸರ್ಕಾರದ ಪ್ರಧಾನ ಕಾರ್ಯದರ್ಶಿ
(ಪಂಚಾಯತ್ ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು- ರಾಜ್ಯದ ಎಲ್ಲಾ ಜಿಲ್ಲಾಪಂಚಾಯತ್.
2. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು- ರಾಜ್ಯದ ಎಲ್ಲಾ ಜಿಲ್ಲೆಗಳು.
3. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ –ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ.
4. ಎಲ್ಲಾ ಜಿಲ್ಲೆಗಳ ತಾಲ್ಲೂಕು ಆರೋಗ್ಯಾಧಿಕಾರಿಗಳು, ಜಿಲ್ಲಾ ಆಕುಕ ಅಧಿಕಾರಿಗಳ ಮುಖಾಂತರ.

**ಪ್ರತಿಯನ್ನು:**

1. ಆಯುಕ್ತರು, ಆರೋಗ್ಯಮತ್ತುಕುಟುಂಬಕಲ್ಯಾಣಯೋಜನೆ, ಬೆಂಗಳೂರು
2. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ವಿಶ್ವಸ್ಥ ಮಂಡಳಿ, ಆರೋಗ್ಯ ಸೌಧ.
5. ಜಂಟಿ ನಿರ್ದೇಶಕರು, ಆಭಾ-ಆಕ. ಆರೋಗ್ಯ ಸೌಧ.
6. ರಾಜ್ಯ ಯೋಜನಾ ವ್ಯವಸ್ಥಾಪಕರು, ಇ-ಆಡಳಿತ, ಗ್ರಾಅಪ ಇಲಾಖೆ.